**Akashvani : Bangalore**
**National Bulletin In Kannada**
**14.04.2025 / 13.10 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**14.04.2025 / 13.10 hrs**

**<><*<><>*><>**

ಮುಖ್ಯಾಂಶಗಳು

೧. ದೇಶಾದ್ಯಂತ ಇಂದು ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಆಚರಣೆ ; ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರಿಂದ ಗೌರವ ನಮನ

೨. ನಿರಂತರ, ಕ್ಷಿಪ್ರಗತಿ ಅಭಿವೃದ್ಧಿ ಕೇಂದ್ರ ಸರ್ಕಾರದ ಮಂತ್ರ - ಪ್ರಧಾನಿ ನರೇಂದ್ರ ಮೋದಿ

೩. ಕಳೆದ ಹಣಕಾಸು ವರ್ಷದಲ್ಲಿ ಭಾರತೀಯ ರೈಲ್ವೆ ಆದಾಯ ೨.೬೫ ಲಕ್ಷ ಕೋಟಿಗೆ ಏರಿಕೆ

೪. ಐಪಿಎಲ್ ಟಿ-೨೦ ಕ್ರಿಕೆಟ್ ; ಇಂದು ಲಖನೌ ಸೂಪರ್ ಜೈಂಟ್ಸ್-ಚೆನ್ನೈ ಸೂಪರ್ ಕಿಂಗ್ಸ್ ಮುಖಾಮುಖಿ

**<><*<><>*><>**

ಸಂವಿಧಾನ ಶಿಲ್ಪಿ ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ ೧೩೪ ನೇ ಜಯಂತಿಯಂದು ಇಂದು ದೇಶಾದ್ಯಂತ ಅವರಿಗೆ ಗೌರವ ಸಲ್ಲಿಸಲಾಗುತ್ತಿದೆ. ಇದರ ಅಂಗವಾಗಿ ದೇಶಾದ್ಯಂತ ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಪ್ರಧಾನಿ ನರೇಂದ್ರ ಮೋದಿ, ಲೋಕಸಭಾ ಸ್ಪೀಕರ್ ಓಂ ಬಿರ್ಲಾ, ರಾಜ್ಯಸಭಾ ಉಪಸಭಾಪತಿ ಹರಿವಂಶ್, ರಾಜ್ಯಸಭಾ ನಾಯಕ ಜೆ.ಪಿ. ನಡ್ಡಾ, ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ್ ಖರ್ಗೆ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಸೇರಿದಂತೆ ಮತ್ತಿತರ ಸಚಿವರು, ಸಂಸದರು ಹಾಗೂ ಗಣ್ಯರು ಇಂದು ಬೆಳಿಗ್ಗೆ ಸಂಸತ್ ಭವನದ ಸಂಕೀರ್ಣದಲ್ಲಿರುವ ಬಾಬಾಸಾಹೇಬ್ ಪ್ರತಿಮೆಗೆ ಪುಷ್ಪ ನಮನ ಸಲ್ಲಿಸಿದರು. ಡಾ. ಭೀಮರಾವ್ ಅಂಬೇಡ್ಕರ್, ಸಮಾಜ ಸುಧಾರಕ, ಅರ್ಥಶಾಸ್ತ್ರಜ್ಞ, ರಾಜಕಾರಣಿಯಾಗಿ, ಜನರಿಗಾಗಿ ತಮ್ಮ ಜೀವನವನ್ನು ಮುಡಿಪಾಗಿಟ್ಟಿದ್ದರು. ಬಾಬಾಸಾಹೇಬ್ ಡಾ. ಅಂಬೇಡ್ಕರ್, ಸಾಮಾಜಿಕ ಮತ್ತು ಜಾತಿ ತಾರತಮ್ಯವನ್ನು ಕೊನೆಗೊಳಿಸಲು ತಮ್ಮ ಜೀವನದುದ್ದಕ್ಕೂ ಶ್ರಮಿಸಿದ್ದರು. ಸ್ವತಂತ್ರ ಭಾರತದ

ಮೊದಲ ಕಾನೂನು ಮತ್ತು ನ್ಯಾಯ ಸಚಿವರಾಗಿದ್ದ ಅವರಿಗೆ ೧೯೯೦ ರಲ್ಲಿ ಮರಣೋತ್ತರವಾಗಿ ಭಾರತದ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ ಭಾರತ ರತ್ನವನ್ನು ನೀಡಿ ಗೌರವಿಸಲಾಗಿದೆ.

<><*<><>*><>

ನಿರಂತರ ಹಾಗೂ ಕ್ಷಿಪ್ರಗತಿಯ ಅಭಿವೃದ್ಧಿ ಕೇಂದ್ರ ಸರ್ಕಾರದ ಮಂತ್ರವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಸಂದರ್ಭದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಹರಿಯಾಣದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು. ಪ್ರಧಾನಿ ನರೇಂದ್ರ ಮೋದಿ ಇಂದು ಹರಿಯಾಣದ ಹಿಸ್ಸಾರ್‌ನಲ್ಲಿ ಹಿಸ್ಸಾರ್-ಅಯೋಧ್ಯೆ ನಡುವಿನ ವಾಣಿಜ್ಯ ವಿಮಾನ ಯಾನಕ್ಕೆ ಹಸಿರು ನಿಶಾನೆ ತೋರಿದರು. ಇದೇ ವೇಳೆ ಅವರು, ೪೧೦ ಕೋಟಿ ರೂಪಾಯಿ ಮೌಲ್ಯದ ಹಿಸ್ಸಾರ್ ವಿಮಾನ ನಿಲ್ದಾಣದ ಹೊಸ ಟರ್ಮಿನಲ್-೨ ಕಟ್ಟಡದ ಶಂಕುಸ್ಥಾಪನೆ ನೆರವೇರಿಸಿದರು. ಬಳಿಕ ಮಾತನಾಡಿದ ಅವರು, ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಜೀವನ ಸಂಘರ್ಷ, ಸಂದೇಶ ಕೇಂದ್ರ ಸರ್ಕಾರದ ೧೧ ವರ್ಷಗಳ ಯಾತ್ರೆಯ ಪ್ರೇರಣ ಸ್ತಂಭವಾಗಿದೆ. ನಾವು ತೆಗೆದುಕೊಂಡಿರುವ ಪ್ರತಿಯೊಂದು ನಿರ್ಧಾರಗಳು, ಜಾರಿಗೊಳಿಸಿರುವ ಪ್ರತಿಯೊಂದು ನೀತಿಗಳು, ಬಾಬಾ ಸಾಹೇಬ್ ಅಂಬೇಡ್ಕರ್ ಅವರಿಗೆ ಸಮರ್ಪಿತವಾಗಿದೆ ಎಂದರು. ನಿರಂತರ ಪ್ರಗತಿಯ ಮಂತ್ರದೊಂದಿಗೆ ಕೇಂದ್ರ ಸರ್ಕಾರ ಇಂದು ಹರಿಯಾಣದಿಂದ ಅಯೋಧ್ಯೆಗೆ ವಿಮಾನ ಸಂಚಾರಕ್ಕೆ ಚಾಲನೆ ನೀಡಲಾಗಿದೆ. ವಂಚಿತ, ಶೋಷಿತ, ಬಡ ವರ್ಗ, ಆದಿವಾಸಿ ಸಮುದಾಯ ಹಾಗೂ ಮಹಿಳೆಯರ ಜೀವನದಲ್ಲಿ ಬದಲಾವಣೆಗಳನ್ನು ತರಲು ಅವರ ಕನಸುಗಳನ್ನು ನನಸಾಗಿಸಲು ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಹೇಳಿದರು. ೨೦೧೪ ಕ್ಕಿಂತ ಮೊದಲು ಭಾರತದಲ್ಲಿ ಕೇವಲ ೭೪ ವಿಮಾನ ನಿಲ್ದಾಣಗಳಿದ್ದವು. ಈಗ ಭಾರತದ ವಿಮಾನ ನಿಲ್ದಾಣಗಳ ಸಂಖ್ಯೆ ೧೫೦ಕ್ಕೂ ಮೀರಿದೆ. ಕೇಂದ್ರ ಸರ್ಕಾರದ ಉಡಾನ್ ಯೋಜನೆಯ ಯಶಸ್ವಿ ಅನುಷ್ಠಾನ ಸಾವಿರಾರು ಭಾರತೀಯರನ್ನು ಮೊದಲ ಬಾರಿಗೆ ವಿಮಾನಯಾನ ಕೈಗೊಳ್ಳಲು ಅನುವು ಮಾಡಿಕೊಟ್ಟಿದೆ ಎಂದು ಪ್ರಧಾನಿ ಮಾಹಿತಿ ನೀಡಿದರು.

ಧ್ವನಿ : ಪ್ರಧಾನಿ ನರೇಂದ್ರ ಮೋದಿ (೫೨ ಸೆಕೆಂಡ್‌ಗಳು)

ಪ್ರಸ್ತುತ ಯಮುನಾ ನಗರದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಹಾಗೂ ಲೋಕಾರ್ಪಣೆ ನೆರವೇರಿಸುವ ಕಾರ್ಯಕ್ರಮದಲ್ಲಿ ಪ್ರಧಾನಿ ಪಾಲ್ಗೊಂಡಿದ್ದಾರೆ. ವಿದ್ಯುಚ್ಛಕ್ತಿ ಮೂಲಸೌಕರ್ಯಕ್ಕೆ ಒತ್ತಾಸೆ ನೀಡುವ ದೀನ ಬಂಧು ಚೋಟು ರಾಮ್ ಶಾಖೋತ್ಪನ್ನ ವಿದ್ಯುತ್ ಸ್ಥಾವರದ ೮೦೦ ಮೆಗಾವ್ಯಾಟ್ ಸಾಮರ್ಥ್ಯದ ಆಧುನಿಕ ಶಾಖೋತ್ಪನ್ನ ಘಟಕಕ್ಕೆ ಶಿಲಾನ್ಯಾಸ

ನೆರವೇರಿಸಲಿದ್ದಾರೆ. ಗೋಬರ್‌ಧನ್ ಯೋಜನೆ ಅನ್ವಯ ಮುಕರಾಬ್‌ಪುರದಲ್ಲಿ ಸಂಕುಚಿತ ಜೈವಿಕ ಅನಿಲ ಸ್ಥಾವರಕ್ಕೆ ಅಡಿಗಲ್ಲು ಇರಿಸಲಿದ್ದಾರೆ. ಭಾರತ್ ಮಾಲಾ ಪರಿ ಯೋಜನೆಯಡಿ ಒಂದು ಸಾವಿರದ ೭೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ೧೪.೪ ಕಿಲೋಮೀಟರ್ ರೇವಾರಿ ಬೈಪಾಸ್ ಯೋಜನೆಯನ್ನು ಪ್ರಧಾನಿಯವರು ಸೇವೆಗೆ ಸಮರ್ಪಿಸಲಿದ್ದಾರೆ.

<><*<><>*><>

೨೦೨೪-೨೫ನೇ ಹಣಕಾಸು ವರ್ಷದಲ್ಲಿ ಭಾರತೀಯ ರೈಲ್ವೆ ಉತ್ತಮ ಕಾರ್ಯಕ್ಷಮತೆಯನ್ನು ಪ್ರದರ್ಶಿಸಿದ್ದು, ಹೆಚ್ಚಿನ ಆದಾಯ ಗಳಿಸಿದೆ. ಅಧಿಕೃತ ಅಂಕಿ-ಅಂಶಗಳ ಪ್ರಕಾರ ಕಳೆದ ಮಾರ್ಚ್ ೩೧ರಂದು ಕೊನೆಗೊಂಡ ಹಣಕಾಸು ವರ್ಷದಲ್ಲಿ ಭಾರತೀಯ ರೈಲು ಶೇಕಡ ೯೮.೩೨ ರಷ್ಟು ಸುಧಾರಿತ ಕಾರ್ಯಚರಣ ಅನುಪಾತ ದಾಖಲಿಸಿದ್ದು, ಆದಾಯ ೨.೬೫ ಲಕ್ಷ ಕೋಟಿ ರೂಪಾಯಿಗೆ ಏರಿಕೆಯಾಗಿದೆ. ಪ್ರಯಾಣಿಕರ ಆದಾಯವು ಶೇಕಡ ೬.೪ ರಷ್ಟು ಏರಿಕೆ ದಾಖಲಿಸಿದ್ದು, ಸರಕು, ಸಾಗಾಣೆ ಆದಾಯ ಶೇಕಡ ೧.೭ ರಷ್ಟು ಹೆಚ್ಚಳವಾಗಿದೆ. ರೈಲ್ವೆ ವಿಭಾಗದಲ್ಲಿ ಕಾರ್ಯಪಡೆ ನಿರ್ವಹಣೆ, ಹಳಿಗಳ ವಿದ್ಯುದ್ದೀಕರಣಗಳಂತಹ ವೆಚ್ಚ ಕಡಿತ ಕ್ರಮಗಳನ್ನು ಕೈಗೊಳ್ಳಲಾಗಿದ್ದು, ಇದರಿಂದ ಕಾರ್ಯಾಚರಣೆ ಅನುಪಾತ ಸುಧಾರಿಸಿದೆ.

<><*<><>*><>

ರಾಷ್ಟ್ರೀಯ ಭದ್ರತೆ ಕುರಿತಂತೆ ತಪ್ಪು ಮಾಹಿತಿ ಹರಡಿದ ಆರೋಪದ ಮೇಲೆ ಪಂಜಾಬ್ ವಿಧಾನಸಭೆ ವಿರೋಧಪಕ್ಷದ ನಾಯಕ ಪ್ರತಾಪ್ ಸಿಂಗ್ ಬಾಜ್ವಾ ಅವರ ಮೇಲೆ ಮೊಹಾಲಿ ಸೈಬರ್ ಅಪರಾಧ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ. ಪಂಜಾಬ್‌ಗೆ ೫೦ಕ್ಕೂ ಹೆಚ್ಚು ಬಾಂಬ್ ಸೇರಿದಂತೆ ಇತರ ಸ್ಫೋಟಕಗಳನ್ನು ಕಳ್ಳ ಸಾಗಾಣೆ ಮಾಡಲಾಗಿದೆ. ಮತ್ತು ಅವುಗಳಲ್ಲಿ ೧೮ ಬಾಂಬ್‌ಗಳನ್ನು ಈಗಾಗಲೇ ವಿವಿಧ ಭಯೋತ್ಪಾದಕ ಚಟುವಟಿಕೆಗಳಿಗೆ ಬಳಸಲಾಗಿದೆ ಎಂದು ಬಾಜ್ವಾ ಟಿವಿ ವಾಹಿನಿಯೊಂದರ ಸಂದರ್ಶನವೊಂದರಲ್ಲಿ ಹೇಳಿದ್ದರು ಎನ್ನಲಾಗಿದೆ.

<><*<><>*><>

ಪಂಜಾಬ್ ನ್ಯಾಷನಲ್ ಬ್ಯಾಂಕ್ ಸಾಲ ವಂಚನೆ ಪ್ರಕರಣಕ್ಕೆ ಸಂಬಂಧಸಿದಂತೆ ವಜ್ರ ವ್ಯಾಪಾರಿ ಮೆಹುಲ್ ಚೋಕ್ಸಿಯನ್ನು ಬೆಲ್ಜಿಯಂ ಪೊಲೀಸರು ಬಂಧಿಸಿದ್ದಾರೆ ಎಂದು ವರದಿಯಾಗಿದೆ. ಕೇಂದ್ರ ತನಿಖಾದಳದ ಕೋರಿಕೆಯ ಮೇರೆಗೆ ಮುಂಬೈ ನ್ಯಾಯಾಲಯ ಚೋಕ್ಸಿ ವಿರುದ್ಧ ಹೊರಡಿಸಿದ ೨

ಮುಕ್ತ ಬಂಧನ ವಾರೆಂಟ್ ಅನ್ನು ಪೊಲೀಸರು ಉಲ್ಲೇಖಿಸಿ, ಮೆಹುಲ್ ಚೋಕ್ಸಿಯನ್ನು ಬಂಧಿಸಿದ್ದಾರೆ. ಮೆಹುಲ್ ಚೋಕ್ಸಿ ಬಂಧನ ಒಂದು ಮಹತ್ವದ ಸಾಧನೆ ಎಂದು ಕೇಂದ್ರ ಹಣಕಾಸು ರಾಜ್ಯ ಸಚಿವ ಪಂಕಜ್ ಚೌಧರಿ ಹೇಳಿದ್ದಾರೆ.

<><*<><>*><>

ಫಿಜಿ ದ್ವೀಪಗಳ ದಕ್ಷಿಣ ಭಾಗದಲ್ಲಿಂದು ಭೂಕಂಪ ಸಂಭವಿಸಿದ್ದು, ರಿಕ್ಟರ್ ಮಾಪಕದಲ್ಲಿ ೬.೩ ತೀವ್ರತೆ ದಾಖಲಾಗಿದೆ. ರಾಷ್ಟ್ರೀಯ ಭೂಕಂಪ ಶಾಸ್ತ್ರದ ಪ್ರಕಾರ ಭೂಕಂಪ ೧೦ ಕಿಲೋಮೀಟರ್ ಆಳದಲ್ಲಿ ಸಂಭವಿಸಿದ್ದು, ಆ ಪ್ರದೇಶಗಳಲ್ಲಿ ಭೂಕಂಪನದ ಅನುಭವಗಳಿಗೆ ಕಾರಣವಾಗಿದೆ. ಇಲ್ಲಿಯವರೆಗೆ ಯಾವುದೇ ಸುನಾಮಿ ಎಚ್ಚರಿಕೆಗಳನ್ನು ನೀಡಲಾಗಿಲ್ಲ.

<><*<><>*><>

ರಾಜ್ಯಾದ್ಯಂತ ವಸತಿ ಮೇಲ್ಛಾವಣಿ ಸೌರಶಕ್ತಿ ವ್ಯವಸ್ಥೆಗಳ ಅಳವಡಿಕೆಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ನಾಗಾಲ್ಯಾಂಡ್‌ನಲ್ಲಿಂದು ಸೌರ ಯೋಜನೆಗೆ ನಾಗಾಲ್ಯಾಂಡ್ ಮುಖ್ಯಮಂತ್ರಿ ನಿಫಿಯು ರಿಯೊ ಚಾಲನೆ ನೀಡಿದರು.

<><*<><>*><>

ಉತ್ತರ ಪ್ರದೇಶದ ಏಕಾನ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿಂದು ಲಖನೌ ಸೂಪರ್ ಜೈಂಟ್ಸ್ ಹಾಗೂ ಚೆನ್ನೈ ಸೂಪರ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಮುಂಬೈ ಇಂಡಿಯನ್ಸ್ ತಂಡ ೧೨ ರನ್‌ಗಳ ಜಯ ದಾಖಲಿಸಿದೆ. ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಮುಂಬೈ ತಂಡ ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೨೦೫ ರನ್ ಗಳಿಸಿತು. ಇದಕ್ಕೆ ಉತ್ತರವಾಗಿ ಡೆಲ್ಲಿ ಕ್ಯಾಪಿಟಲ್ಸ್ ೧೯ ಓವರ್‌ಗಳಲ್ಲಿ ತನ್ನೆಲ್ಲ ವಿಕೆಟ್ ಕಳೆದುಕೊಂಡು ೧೯೩ ರನ್ ಗಳಿಸಲಷ್ಟೆ ಶಕ್ತವಾಯಿತು. ರಾಜಸ್ಥಾನದಲ್ಲಿ ನಿನ್ನೆ ನಡೆದ ಮೊದಲ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ರಾಜಸ್ಥಾನ ರಾಯಲ್ಸ್ ತಂಡವನ್ನು ೯ ವಿಕೆಟ್‌ಗಳಿಂದ ಪರಾಭವಗೊಳಿಸಿತು.

<><*<><>*><>

ಚೀನಾದ ಮಕಾವ್‌ನಲ್ಲಿ ನಡೆಯುತ್ತಿರುವ ಐಟಿಟಿಎಫ್ ಟೇಬಲ್ ಟೆನಿಸ್ ವಿಶ್ವ ಕಪ್ -೨೦೨೫ ಟೂರ್ನಿಯಲ್ಲಿ ಭಾರತದ ಮಾನಿಕಾ ಬಾತ್ರಾ ಮತ್ತು ಶ್ರೀಜಾ ಅಕುಲಾ ವೈಯಕ್ತಿಕ ವಿಭಾಘದ ತಮ್ಮ

ತಮ್ಮ ಮೊದಲ ಪಂದ್ಯದಲ್ಲಿ ಗೆಲುವು ಸಾಧಿಸಿದ್ದಾರೆ. ಪ್ರಸ್ತುತ ವಿಶ್ವ ೩೦ನೇ ಶ್ರೇಯಾಂಕದಲ್ಲಿರುವ ಮಾನಿಕಾ ತಮ್ಮ ಆರಂಭಿಕ ಪಂದ್ಯದಲ್ಲಿ ನ್ಯೂ ಕೆಲೆಡೋನಿಯಾದ ಮೈಲಿಸ್ ಗಿರೆಟ್ ಅವರನ್ನು ೧೧-೧, ೧೧-೨, ೧೬-೧೪, ೧೧-೪ ಅಂತರದಲ್ಲಿ ಮಣಿಸಿದರು. ತಮ್ಮ ಮುಂದಿನ ಗುಂಪು ಹಂತದ ಪಂದ್ಯದಲ್ಲಿ ಮಾನಿಕಾ ಬ್ರೆಜಿಲ್‌ನ ವಿಶ್ವ ೨೩ನೇ ಶ್ರೇಯಾಂಕಿತ ಬ್ರೂನಾ ತಕಹಾಶಿ ಅವರನ್ನು ಎದುರಿಸಲಿದ್ದಾರೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ <>*><>